ಅಧ್ಯಕ್ಷರು : ಮಂಡಿಸಲಾಯಿತು.

ಅಧ್ಯಕ್ಷರು : ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

(ಪಟ್ಟಿಯನ್ನು ಲಗತ್ತಿಸಲಾಗಿದೆ)

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು) (ಮಾನ್ಯ ಮುಖ್ಯಮಂತ್ರಿಯವರ ಪರವಾಗಿ): ಮಾನ್ಯ ಅಧ್ಯಕ್ಷರೇ, ಭಾರತ ಸಂವಿಧಾನದ 151 (2) ನೇ ಅನುಚ್ಛೇದದ ಮೇರೆಗೆ ದಿನಾಂಕ 31ನೇ ಮಾರ್ಚ್ 2004ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು ನೀಡಿರುವ ಧನವಿನಿಯೋಗ ಹಾಗೂ ಹಣಕಾಸು ಲೆಕ್ಕಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

I **ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿ) ಅವರು :-**

ಭಾರತ ಸಂವಿಧಾನದ ಅನುಚ್ಛೇದ 323ರ ಪರಿಚ್ಛೇದ (2)ರ ಅನ್ವಯದ ಮೇರೆಗೆ :

1. ಕರ್ನಾಟಕ ಲೋಕಸೇವಾ ಆಯೋಗದ 2002-03ನೇ ಸಾಲಿನ ವಾರ್ಷಿಕ ವರದಿ.

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48 (5) ಮತ್ತು 49ನೇ ಪ್ರಕರಣದ ಮೇರೆಗೆ :

1. ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ 2002-03ನೇ ಸಾಲಿನ ವಾರ್ಷಿಕ ವರದಿ.
2. ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರದ 2003-04ನೇ ಸಾಲಿನ ಲೆಕ್ಕ ತನಿಖಾ ವರದಿ.
3. ಗುಲ್ಬರ್ಗಾ ನಗರಾಭಿವೃದ್ಧಿ ಪ್ರಾಧಿಕಾರದ 2004-05ನೇ ಸಾಲಿನ ವಾರ್ಷಿಕ ವರದಿ.
4. ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ 2004-05ನೇ ಸಾಲಿನ ವಾರ್ಷಿಕ